# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 725 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಿಇಟಿ ಪರೀಕ್ಷೆಯಲ್ಲಿ 40% ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳಿರುವುದು ನಿಜವೇ; | ಹೌದು ಬಂದಿದೆ.<br><br>ಸರ್ಕಾರದ ಆದೇಶ ಸಂ:ಇಡಿ 173 ಟಿಇಸಿ 2024, ದಿನಾಂಕ:22.04.2024ರಲ್ಲಿ ವಿಷಯ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ದಿನಾಂಕ:23.04.2024ರಂದು ನೀಡಿದ ವರದಿಯ ಪ್ರಕಾರ 2024ನೇ ಸಾಲಿನ ಸಿಇಟಿ ಪರೀಕ್ಷೆಯಲ್ಲಿ ನಾಲ್ಕು ವಿಷಯಗಳ ಒಟ್ಟು 50 ಪ್ರಶ್ನೆಗಳು (ಭೌತಶಾಸ್ತ್ರ-09, ರಸಾಯನ ಶಾಸ್ತ್ರ-15, ಗಣಿತ-15 ಮತ್ತು ಜೀವಶಾಸ್ತ್ರ-09) ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳನ್ನು ಕೇಳಲಾಗಿರುತ್ತದೆ. |
| ಆ | ಸಿಇಟಿ ಪರೀಕ್ಷೆ ಪ್ರತಿ ವಿದ್ಯಾರ್ಥಿಯ ಫಲಿತಾಂಶವು ವ್ಯತ್ಯಾಸ ಆಗಿದ್ದು ಇದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಮೇಲೆ ಆಗುವ ಪರಿಣಾಮಗಳ ಬಗ್ಗೆ ಸರ್ಕಾರದ ನಿಲುವೇನು;(ವಿವರ ಒದಗಿಸುವುದು) | ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳನ್ನು ಹೊರತುಪಡಿಸಿ ಉಳಿದ ಪ್ರಶ್ನೆಗಳಿಗೆ ಅಭ್ಯರ್ಥಿಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿ ಫಲಿತಾಂಶವನ್ನು ಪ್ರಕಟಿಸಲಾಗಿರುತ್ತದೆ. ವಿದ್ಯಾರ್ಥಿಗಳ ಫಲಿತಾಂಶದಲ್ಲಿ ಯಾವುದೇ ವ್ಯತ್ಯಾಸ ಆಗಿರುವುದಿಲ್ಲ. |
| ಇ | ಮುಂದೆ ಈ ರೀತಿ ಆಗದಂತೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ? (ವಿವರ ಒದಗಿಸುವುದು) | ದಿನಾಂಕ:09.05.2024ರ ಆದೇಶದನ್ವಯ ಶ್ರೀ ಡಿ.ಎನ್.ನರಸಿಂಹರಾಜು, ಅಪರ ಮುಖ್ಯ ಕಾರ್ಯದರ್ಶಿಗಳು (ಭಾ.ಆ.ಸೇ., ನಿವೃತ್ತ) ಇವರ ಏಕ ಸದಸ್ಯ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ವಿಚಾರಣೆ ನಡೆಸಿ, ವರದಿ ನೀಡಿದ ನಂತರ ಪರಿಶೀಲಿಸಿ, ಅಗತ್ಯ ಕ್ರಮವಹಿಸಲಾಗುವುದು. |

ಸಂ:ಇಡಿ 375 ಟಿಇಸಿ 2024

(ಡಾ. ಎಂ.ಸಿ.ಸುಧಾಕರ್)
**ಉನ್ನತ ಶಿಕ್ಷಣ ಸಚಿವರು**